# ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ

## ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560 018

ಸಂಖ್ಯೆ: ಕಸಂವಿ:ಅಧಿಸೂಚನೆ/ವಿ.ಮ.ವಿ.ಉ/ಪರೀಕ್ಷೆಗಳು/05/2014–15 **ದಿನಾಂಕ: 08.01.2015**

## ಅಧಿಸೂಚನೆ

**ವಿಷಯ: 2014–15ನೇ ಸಾಲಿನಲ್ಲಿ ನಡೆಯಲಿರುವ ಜ್ಯೋತಿಷ್ಯ ಸರ್ಟಿಫಿಕೇಟ್ ಹಾಗೂ ಜ್ಯೋತಿಷ್ಯ ಡಿಪ್ಲೋಮಾ ಪರೀಕ್ಷೆಗಳಿಗೆ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಬಗೆಗೆ.**

| ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ | ಬ್ಯಾಂಕ್ ಹುಂಡಿ ಪಡೆಯುವ ದಿನಾಂಕ | ಬ್ಯಾಂಕ್ ಹುಂಡಿಗಳ ಸಹಿತ ಅರ್ಜಿಗಳನ್ನು ವಿಶ್ವವಿದ್ಯಾಲಯಕ್ಕೆ ರವಾನಿಸುವ ದಿನಾಂಕ |
|---|---|---|
| **10.02.2015** | **12.02..2015** | **16.02.2015** |

**ಸೂಚನೆಗಳು:**

1. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದಿಂದ ಅಧಿಕೃತ ಮಾನ್ಯತೆ ಪಡೆದ ಖಾಸಗಿ ಜ್ಯೋತಿಷ್ಯ ಅಧ್ಯಯನ ಕೇಂದ್ರಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.
2. ಪರೀಕ್ಷಾ ಶುಲ್ಕದ ಹುಂಡಿ (ಡಿ.ಡಿ.)ಯನ್ನು **"ಹಣಕಾಸು ಅಧಿಕಾರಿಗಳು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು (Finance Officer, Karnataka Samskrit University, Bangalore)"** ಈ ಹೆಸರಿನಲ್ಲಿ ಪಡೆದು ನಿಗದಿತ ದಿನಾಂಕದಂದು ಅರ್ಜಿಯೊಂದಿಗೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸುವುದು.
3. ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.
4. ವಿಶ್ವವಿದ್ಯಾಲಯವು ನೀಡಿರುವ ಅಧಿಕೃತ ನಮೂನೆಯಲ್ಲಿ ಮಾಹಿತಿಯನ್ನು ಸ್ಪಷ್ಟವಾಗಿ ನಮೂದಿಸಿ ಸಲ್ಲಿಸುವುದು. ವಿಶ್ವವಿದ್ಯಾಲಯವು ನಿರ್ಧರಿಸಿದ ಪಾಠ್ಯಕ್ರಮದಂತೆ ಪರೀಕ್ಷೆಗಳು ನಡೆಯುತ್ತವೆ.
5. ಅರ್ಜಿಗಳೊಂದಿಗೆ ಸಲ್ಲಿಸುವ ನಾಮಾಂಕಿತ ಪಟ್ಟಿಯಲ್ಲಿ ಕೇಂದ್ರ ಸಂಖ್ಯೆ, ಹೆಸರು ಹಾಗೂ ಕಾಲೇಜಿನ ಸಂಕೇತ ಸಂಖ್ಯೆ, ಹೆಸರು ಹಾಗೂ ಸಮೀಪದ ಅಂಚೆ ಕಛೇರಿಯ ಪಿನ್‌ಕೋಡ್ ನಂಬರ್‌ಗಳನ್ನು ಸ್ಪಷ್ಟವಾಗಿ ನಮೂದಿಸುವುದು.
6. ಪರೀಕ್ಷೆಯ ನಂತರ ವಿನಾಯಿತಿ ಕೋರಿ ಸಲ್ಲಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
7. ಪರೀಕ್ಷೆ ತೆಗೆದುಕೊಳ್ಳುವ ಎಲ್ಲ ಅಭ್ಯರ್ಥಿಗಳಿಂದ ಇತ್ತೀಚಿನ ಎರಡು ಭಾವಚಿತ್ರಗಳನ್ನು ಪಡೆದು ಒಂದನ್ನು ಅರ್ಜಿಗೂ ಮತ್ತೊಂದನ್ನು ಪ್ರವೇಶ ಪತ್ರಕ್ಕೂ ಲಗತ್ತಿಸಿ ಪ್ರಾಚಾರ್ಯರು ದೃಢೀಕರಿಸಿ ಕಳುಹಿಸುವುದು.

**8.** ತರಗತಿವಾರು ಪರೀಕ್ಷಾ ಶುಲ್ಕವನ್ನು ಈ ಕೆಳಕಂಡ ಪಟ್ಟಿಯಲ್ಲಿ ತಿಳಿಸಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ–1ರ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕದಿಂದ ಸಂಪೂರ್ಣ ವಿನಾಯಿತಿ ನೀಡಲಾಗಿದೆ. ವಿನಾಯಿತಿ ಪಡೆಯುವ ವಿದ್ಯಾರ್ಥಿಗಳು ತಹಶೀಲ್ದಾರ್‌ರವರಿಂದ ಪಡೆದ ಜಾತಿ ಪ್ರಮಾಣ ಪತ್ರದ ನಕಲು ಪ್ರತಿಯನ್ನು ದೃಢೀಕರಿಸಿ ಕಳುಹಿಸುವುದು. ನಕಲು ಪ್ರಮಾಣಪತ್ರಗಳು ಇಲ್ಲದಿದ್ದಲ್ಲಿ ಶುಲ್ಕದ ದುಪ್ಪಟ್ಟು ಹಣವನ್ನು ಪ್ರಾಚಾರ್ಯರೇ ಭರಿಸಬೇಕು.

| ಕ್ರ. ಸಂ | ಪರೀಕ್ಷೆಗಳ ವಿವರ | ಪರೀಕ್ಷಾ ಶುಲ್ಕ | sc/st |
|---|---|---|---|
| **1.** | ಜ್ಯೋತಿಷ್ಯ ಸರ್ಟಿಫಿಕೇಟ್ | 1500.00 | 750.00 |
| **2.** | ಜ್ಯೋತಿಷ್ಯ ಡಿಪ್ಲೊಮಾ | 2000.00 | **1000.00** |

2. ಜನ್ಮ ದಿನಾಂಕದ ನಕಲು ಪ್ರತಿಯನ್ನು ದೃಢೀಕರಿಸಿ ಸಲ್ಲಿಸುವುದು.

3. ಪರೀಕ್ಷಾ ಕೇಂದ್ರಗಳಲ್ಲಿ ಅಭ್ಯರ್ಥಿಗಳ ಸಂಖ್ಯೆ ಕಡಿಮೆಯಾದಲ್ಲಿ ಅಂತಹ ಪರೀಕ್ಷಾ ಕೇಂದ್ರವನ್ನು ರದ್ದುಗೊಳಿಸಿ ಸಮೀಪದ ಪರೀಕ್ಷಾ ಕೇಂದ್ರಕ್ಕೆ ವರ್ಗಾಯಿಸಲಾಗುವುದು.

4. ಜ್ಯೋತಿಷ್ಯ ಸರ್ಟಿಫಿಕೇಟ್ ಹಾಗೂ ಜ್ಯೋತಿಷ್ಯ ಡಿಪ್ಲೋಮಾ ತರಗತಿಗಳಿಗೆ ಸಂಬಂಧಪಟ್ಟ ಅರ್ಹತಾ ಪರೀಕ್ಷೆಗಳ ಪ್ರಮಾಣಪತ್ರ ಹಾಗೂ ಅಂಕಪಟ್ಟಿಯ ಜೆರಾಕ್ಸ ಪ್ರತಿಯನ್ನು ದೃಢೀಕರಿಸಿ ಅರ್ಜಿಯ ಜೊತೆ ಲಗತ್ತಿಸುವುದು. (ಹಿಂದೆ ತೇರ್ಗಡೆಯಾಗಿರುವ ಅಂಕಪಟ್ಟಿಯ ಜೆರಾಕ್ಸ್ ಪ್ರತಿಯನ್ನು ದೃಢೀಕರಿಸಿ ಅರ್ಜಿಯ ಜೊತೆ ಲಗತ್ತಿಸುವುದು.ಇಲ್ಲದಿದ್ದಲ್ಲಿ ತಿರಸ್ಕರಿಸಲಾಗುವುದು).

**ವಿಶೇಷ ಸೂಚನೆ :**

1. ಜ್ಯೋತಿಷ್ಯ ಸರ್ಟಿಫಿಕೇಟ್ ಹಾಗೂ ಜ್ಯೋತಿಷ್ಯ ಡಿಪ್ಲೋಮಾ ವಿದ್ಯಾರ್ಥಿಗಳ ಅರ್ಜಿ ಮತ್ತು ನಾಮಾಂಕಿತ ಪಟ್ಟಿಗಳನ್ನು ತರಗತಿವಾರು ಪ್ರತ್ಯೇಕವಾಗಿ ಸಲ್ಲಿಸುವುದು.
2. ಅಭ್ಯರ್ಥಿಯ ಹೆಸರು ಮತ್ತು ತಂದೆಯ ಹೆಸರನ್ನು ಅರ್ಜಿ ಮತ್ತು ನಾಮಾಂಕಿತ ಪಟ್ಟಿಗಳಲ್ಲಿ ಸಂಸ್ಕೃತ ಹಾಗೂ ಆಂಗ್ಲಭಾಷೆಯಲ್ಲಿ ಸ್ಪಷ್ಟವಾಗಿ ದಪ್ಪ ಅಕ್ಷರಗಳಲ್ಲಿ (ಕ್ಯಾಪಿಟಲ್ ಲೆಟರ್ಸ್) ನಮೂದಿಸಿ ಕಳುಹಿಸುವುದು.

3. ನಾಮಾಂಕಿತ ಪಟ್ಟಿಯಲ್ಲಿರುವ ಎಲ್ಲಾ ಮಾಹಿತಿಗಳನ್ನು ಪ್ರತ್ಯೇಕ ಫೈಲ್ ಮಾಡಿ ಗಣಕಯಂತ್ರದ (ಕಂಪ್ಯೂಟರ್) ನುಡಿ/ಬರಹ ತಂತ್ರಾಂಶದಲ್ಲಿ ಒಂದೇ ಸಿ.ಡಿ.ಯಲ್ಲಿ ಸಲ್ಲಿಸುವುದು.

4. ಸಿ.ಡಿ.ಯಲ್ಲಿ ನಮೂದಿಸಿರುವ ಮಾಹಿತಿಯನ್ನೇ ಅಂತಿಮವೆಂದು ಪರಿಗಣಿಸಲಾಗುವುದು. ಅದರಲ್ಲಿ ಉಂಟಾದ ತಪ್ಪುಗಳಿಗೆ ಸಂಬಂಧಿಸಿದ ಕಾಲೇಜಿನ ಪ್ರಾಚಾರ್ಯರೇ ಹೊಣೆಗಾರರಾಗಿರುತ್ತಾರೆ.

5. ಜ್ಯೋತಿಷ್ಯ ಸರ್ಟಿಫಿಕೇಟ್ ಹಾಗೂ ಜ್ಯೋತಿಷ್ಯ ಡಿಪ್ಲೋಮಾ ತರಗತಿಗಳ ಅಭ್ಯರ್ಥಿಗಳಿಗೆ ಪರೀಕ್ಷೆಯಲ್ಲಿ ಪ್ರತಿಯೊಂದು ಪತ್ರಿಕೆಗಳಿಗೆ 75 ಅಂಕಗಳನ್ನು.ಇನ್ನುಳಿದ 25 ಅಂಕಗಳನ್ನು ಆಂತರಿಕ ಪರೀಕ್ಷೆಗಳಿಗಾಗಿ(Assignment/ Project Work) ನಿಗದಿಪಡಿಸಲಾಗಿದೆ. ಈ ಆಂತರಿಕ ಪರೀಕ್ಷೆಗಳನ್ನು ಆಯಾಯ ಕಾಲೇಜುಗಳ ಪ್ರಾಚಾರ್ಯರೇ ನಡೆಸಿ ಆ ಅಂಕಗಳನ್ನು ವಿಶ್ವವಿದ್ಯಾಲಯಕ್ಕೆ ಕಳುಹಿಸಿಕೊಡುವುದು.
6. ಕಾಲೇಜುಗಳು ಆವೇದನ ಪತ್ರಗಳ ಜೊತೆಗೆ ವಿದ್ಯಾರ್ಥಿಗಳ ಆಂತರಿಕ ಅಂಕಗಳಪಟ್ಟಿಯನ್ನು ಪ್ರಾಚಾರ್ಯರು ದೃಢೀಕರಿಸಿ ಕಳುಹಿಸಿಕೊಡುವುದು ಆಂತರಿಕ ಮೌಲ್ಯಮಾಪನದ ಅಂಕಗಳಿಲ್ಲದ ಆವೇದನಪತ್ರಗಳನ್ನು ತಿರಸ್ಕರಿಸಲಾಗುವುದು.
7. ಮೇಲೆ ಹೇಳಿರುವ ಯಾವುದೇ ನಿಯಮ ಉಲ್ಲಂಘನೆಯಾದ ವಿಷಯವು ಕಸಂವಿಯ ಗಮನಕ್ಕೆ ಬಂದರೆ ಅವರ ಅಂಕಪಟ್ಟಿಯನ್ನು ರದ್ದುಗೊಳಿಸಲಾಗುವುದು.

ಸಹಿ/–

**ಕುಲಸಚಿವರು**

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ

ಬೆಂಗಳೂರು